ಉಡುಪಿ ಸಾರ್ವಜನಿಕ ಹೆರಿಗೆ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ಸಿಬ್ಬಂದಿ ಕೊರತೆ.

790 - ಶ್ರೀ ಯು.ಆರ್. ಸಭಾಪತಿ (ಶಾಸಕರು) : ಮಾನ್ಯ ಆರೋಗ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಉಡುಪಿ ಸಾರ್ವಜನಿಕ ಹೆರಿಗೆ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ 9 ವೈದ್ಯಾಧಿಕಾರಿಗಳು, ಶುಶ್ರೂಷಕ ಅಧೀಕ್ಷಕಿ ದರ್ಜೆ-2ರ ಒಂದು ಮತ್ತು ಹಿರಿಯ ಪ್ರಯೋಗ ಶಾಲಾ ತಂತ್ರಜ್ಞರ 2 ಹುದ್ದೆಗಳು ಖಾಲಿ ಇರುವುದರಿಂದ ಸಾರ್ವಜನಿಕರಿಗೆ ತೊಂದರೆ ಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ? ಬಂದಿದ್ದಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು?*

ಆ) *ಖಾಯಂ ಆಗಿ ನೇಮಕ ಮಾಡಲು ಸಾಧ್ಯವಿಲ್ಲದಿದ್ದಲ್ಲಿ ಗುತ್ತಿಗೆ ಆಧಾರದಲ್ಲಿ ನೇಮಕ ಮಾಡಲಾಗುವುದೇ?*

ಇ) *ಗುತ್ತಿಗೆ ಆಧಾರದಲ್ಲಿ ಅಥವಾ ಖಾಯಂ ಆಗಿ ಯಾವಾಗ ನೇಮಕ ಮಾಡಲಾಗುವುದು (ವಿವರ ನೀಡುವುದು)*

ಡಾ|| ಹೆಚ್. ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಬಂದಿದೆ. ಈಗಾಗಲೇ ಒಂದು ವೈದ್ಯಾಧಿಕಾರಿ ಹುದ್ದೆ ದಿನಾಂಕ : 12-3-97ರಂದು ಭರ್ತಿ ಮಾಡಲಾಗಿದೆ.

ಆ) ಖಾಯಂ ಆಗಿ ನೇಮಕ ಮಾಡಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ.

ಇ) ವೈದ್ಯಾಧಿಕಾರಿಗಳಿಗೆ ಜೇಷ್ಠತೆ ಮತ್ತು ತಜ್ಞತೆ ಮೇರೆಗೆ ನೇಮಕಗಳನ್ನು ಮಾಡುವ ಪ್ರಕ್ರಿಯೆ ನಡೆಯುತ್ತಿದ್ದು ಈ ಹುದ್ದೆಗಳನ್ನು ತುಂಬುವತ್ತ ಆದ್ಯ ಗಮನ ನೀಡುಲಾಗುತ್ತಿದೆ. ಶುಶ್ರೂಷ ಅಧೀಕ್ಷಕ-2 ಹುದ್ದೆಯನ್ನು ಪದೋನ್ನತಿ ಮೇಲೆ ತುಂಬಲು ಕ್ರಮ ಕೈಗೊಳ್ಳಲಾಗುತ್ತಿದೆ. ಕಿರಿಯ ಪ್ರಯೋಗಶಾಲಾ ತಂತ್ರಜ್ಞರ ಹೆಚ್ಚುವರಿ ನೇಮಕಾತಿಗೆ ಸರ್ಕಾರ ಅನುಮೋದನೆ ನೀಡಿದ್ದು ಆ ಪ್ರಕ್ರಿಯೆಯಲ್ಲಿ ಇಲ್ಲಿನ ಹುದ್ದೆಗಳನ್ನು ತುಂಬಲು ಆದ್ಯ ಗಮನ ನೀಡಲಾಗುವುದು.

ಉಡುಪಿ ಸಾರ್ವಜನಿಕ ಹೆರಿಗೆ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿ

791 - ಶ್ರೀ ಯು.ಆರ್. ಸಭಾಪತಿ (ಉಡುಪಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಉಡುಪಿ ಸಾರ್ವಜನಿಕ ಆಸ್ಪತ್ರೆಯಲ್ಲಿ ಕಿರಿಯ ಪ್ರಯೋಗಶಾಲಾ ತಂತ್ರಜ್ಞ ಮತ್ತು ವಾಹನ ಚಾಲಕರ ಹುದ್ದೆಗಳು ಕ್ರಮವಾಗಿ 3 ಮಂಜೂರಾಗಿದ್ದು ಎಲ್ಲಾ 6 ಹುದ್ದೆಗಳೂ ಭರ್ತಿಯಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಅ) *ಬಂದಿದ್ದಲ್ಲಿ ಈ ಬಗ್ಗೆ ಸರ್ಕಾರ ಕ್ರಮ ತೆಗೆದುಕೊಳ್ಳದಿರಲು ಕಾರಣಗಳೇನು?*

ಇ) *ಈ ಹುದ್ದೆಗಳನ್ನು ತುಂಬದಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುವುದರಿಂದ, ಸರ್ಕಾರ ಏನು ಕ್ರಮ ತೆಗೆದುಕೊಳ್ಳುವುದು? (ವಿವರ ನೀಡುವುದು).*

ಡಾ|| ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಈ ಆಸ್ಪತ್ರೆಗೆ ಕಿರಿಯ ಪ್ರಯೋಗ ಶಾಲಾ ತಂತ್ರಜ್ಞರ 3 ಹುದ್ದೆಗಳು ಹಾಗೂ ವಾಹನ ಚಾಲಕರ 2 ಹುದ್ದೆಗಳು ಮಂಜೂರಾಗಿದ್ದು, ಅವು ಭರ್ತಿಯಾಗದೆ ಇರುವುದು ಗಮನಕ್ಕೆ ಬಂದಿರುತ್ತದೆ.

ಆ) ಕಿರಿಯ ಪ್ರಯೋಗಶಾಲಾ ತಂತ್ರಜ್ಞನ ನೇರ ನೇಮಕಾತಿ ಸದ್ಯದಲ್ಲೇ ಆಗಲಿದ್ದು ಆಗ ಖಾಲಿ ಇರುವ ಈ ತಂತ್ರಜ್ಞರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು. ಇಷ್ಟರಲ್ಲಿಯೇ ಗ್ರೂಪ್-ಡಿ ನೌಕರರಿಗೆ ವಾಹನ ಚಾಲಕರಾಗಿ ಪದೋನ್ನತಿ ನೀಡುತ್ತಿದ್ದು ಆಗ ಖಾಲಿ ಇರುವ ಈ ವಾಹನ ಚಾಲಕರ ಹುದ್ದೆ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಇ) ಮೇಲೆ ತಿಳಿಸಿದಂತೆ ಕ್ರಮ ಕೈಗೊಂಡು ಹುದ್ದೆಗಳನ್ನು ಭರ್ತಿ ಮಾಡಲಾಗುವುದು.

ದ.ಕನ್ನಡ ಜಿಲ್ಲೆಯಲ್ಲಿ ದುಸ್ಥಿತಿಯಲ್ಲಿರುವ ಕೊಳವೆ ಭಾವಿಗಳು

792 - ಶ್ರೀ ಯು.ಆರ್. ಸಭಾಪತಿ (ಉಡುಪಿ) : ಮಾನ್ಯ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಸಚಿವರು ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಒಟ್ಟು ಎಷ್ಟು ಕೊಳವೆ ಬಾವಿಗಳನ್ನು ಕೊರೆಯಲಾಗಿದೆ? (ತಾಲ್ಲೂಕುವಾರು ವಿವರ ನೀಡುವುದು)*

ಆ) *ಇದರಲ್ಲಿ ಸುಸ್ಥಿತಿಯಲ್ಲಿರುವ ಬಾವಿಗಳ ಸಂಖ್ಯೆ ಎಷ್ಟು?*

ಇ) *ದುಸ್ಥಿತಿಯಲ್ಲಿರುವ ಬಾವಿಗಳನ್ನು ಸರಿಪಡಿಸಿ ಸಾರ್ವಜನಿಕ ಉಪಯೋಗಕ್ಕೆ ಯಾವಾಗ ಎಂದು ನೀಡಲಾಗುವುದು (ವಿವರ ನೀಡುವುದು)*

ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಸಚಿವರು) :

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಒಟ್ಟು 10,535 ಕೊಳವೆಬಾವಿಗಳನ್ನು ಕೊರೆಯಲಾಗಿದೆ. (ತಾಲ್ಲೂಕುವಾರು ವಿವರಗಳನ್ನು ಅನುಬಂಧ-1ರಲ್ಲಿ ನೀಡಲಾಗಿದೆ)

ಆ) ಇದರಲ್ಲಿ 8,894 ಕೊಳವೆ ಬಾವಿಗಳು ಸುಸ್ಥಿತಿಯಲ್ಲಿರುತ್ತವೆ.

ಇ) ಸಾಮಾನ್ಯವಾಗಿ ಕೊಳವೆ ಬಾವಿಗಳ ದುರಸ್ತಿಯನ್ನು ದೂರು ಬಂದ ಒಂದು ವಾರದೊಳಗೆ ಕೈಗೊಳ್ಳಲಾಗುವುದು.